# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ ರವರ ನಿಯಮ 72ರಡಿ ಪ್ರಸ್ತಾವನೆಗೆ ಉತ್ತರ.

**ಪ್ರಶ್ನೆ:**

ಸಮಾಜ ಕಲ್ಯಾಣ ಇಲಾಖೆಯಲ್ಲಿ ಎಸ್.ಸಿ ಎಸ್‌ಟಿ, ಹಿಂದುಳಿದ ವರ್ಗಗಳ ಇಲಾಖೆ ಆಶ್ರಮ ವಸತಿ ಶಾಲೆಗಳಲ್ಲಿ (1 ರಿಂದ 5ನೇ ತರಗತಿ) ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರನ್ನು ಸರ್ಕಾರಿ ನೌಕಕರೆಂದು ಪರಿಗಣಿಸಿ ಸರ್ಕಾರಿ ನೌಕರರಿಗೆ ನೀಡುತ್ತಿರುವ ಎಲ್ಲ ಸೌಲಭ್ಯಗಳನ್ನು ಸಮಾಜ ಕಲ್ಯಾಣ ಇಲಾಖೆಯಿಂದಲೇ ಕಾಲಕಾಲಕ್ಕೆ ನೀಡುತ್ತಾ ಬರಲಾಗುತ್ತಿದೆ. ಅದೇ ರೀತಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ನಡೆಯುತ್ತಿರುವ ವಸತಿ ಶಾಲೆಗಳಾದ ಮುರಾರ್ಜಿ ದೇಸಾಯಿ ವಸತಿ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಡಾ:ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ (6 ರಿಂದ 10 ನೇ ತರಗತಿ) ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರನ್ನು ಸಂಘದ ನೌಕರರಾಗಿ ಪರಿಗಣಿಸಿ ಒಂದೇ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಸರ್ಕಾರಿ ನೌಕರರಿಗೆ ಸಿಗುತ್ತಿರುವ ಸೌಲಭ್ಯಗಳನ್ನು ನೀಡದೆ ತಾರತಮ್ಯ ಉಂಟಾಗಿರುವ ವಿಷಯವನ್ನು ನಿಯಮ 72 ರಲ್ಲಿ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಆಶ್ರಮ ವಸತಿ ಶಾಲೆಗಳು ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ನೇರವಾಗಿ ಕಾರ್ಯನಿರ್ವಹಿಸುತ್ತಿದ್ದು, ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಂತೆ ನೇಮಕಗೊಂಡಿರುತ್ತಾರೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಂಚಿಕೆಯಾಗುವ ಅನುದಾನದಲ್ಲಿ ವಸತಿ ಶಾಲೆ/ಕಾಲೇಜುಗಳನ್ನು ನಿರ್ವಹಿಸಲಾಗುತ್ತಿದೆ. ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಖಾಯಂ ನೌಕರರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

**ಡಿ.ಸಿ.ಆರ್.ಜಿ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ದಿನಾಂಕ:01.04.2018 ರಿಂದ (DCRG) ಕುಂಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸಲು ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿ, ಆರ್ಥಿಕ ಇಲಾಖೆಯ ನೂತನ ಪಿಂಚಣಿ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ಮಾತ್ರ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಈ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯಿಸುವುದಿಲ್ಲವಾದ್ದರಿಂದ ಸಂಘದ ನೌಕರರಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರಿಗೆ DCRG ಸೌಲಭ್ಯ ಮಂಜೂರಾಗುವವರೆಗೆ ಸಂಘದ ಅಧೀನದ ಸೇವಾ ನಿರತ ಖಾಯಂ ಸಿಬ್ಬಂದಿಗಳು ಅಕಾಲಿಕ ಮರಣ ಹೊಂದಿದಲ್ಲಿ ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ. 15.00 ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ನೌಕರರಿಗೆ ನಿವೃತ್ತಿ ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 34/ಪಿ. ಇ. ಎನ್ 2018, ದಿನಾಂಕ: 23.06.2018 ಮತ್ತು ಆದೇಶ ಸಂಖ್ಯೆ:ಆಇ 149 ಪಿ. ಇ. ಎನ್ 2022, ದಿನಾಂಕ: 19.10.2022ರಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ದಿನಾಂಕ:01.04.2006 ರಿಂದ ಜಾರಿಗೆ ಬರುವಂತೆ ವಿಸ್ತರಿಸಿ ಆದೇಶಿಸಲಾಗಿದ್ದು, ಸದರಿ ಆದೇಶವು ರಾಜ್ಯದ ಸ್ವಾಯತ್ತ ಸಂಸ್ಥೆಗಳು, ನಿಗಮ-ಮಂಡಳಿಗಳು, ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾಲಯಗಳು ಮತ್ತು ರಾಜ್ಯದ ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಹಾಗೂ ಅನುಕಂಪ ಆಧಾರದ ಮೇಲೆ ನೌಕರಿ ಪಡೆದ ನೌಕರರಿಗೆ ಅನ್ವಯವಾಗುವುದಿಲ್ಲ, ಎಂದು ತಿಳಿಸಿರುತ್ತದೆ.

**ಕೆ.ಜಿ.ಐ.ಡಿ.**

ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ. ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ ಆರ್ಥಿಕ ಇಲಾಖೆಯು ಕರ್ನಾಟಕ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರಿಗೆ ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಹಿಂಬರಹ ನೀಡಿರುತ್ತದೆ. ಈ ಬಗ್ಗೆ ಶಿಫಾರಸ್ಸು ಕೋರಿ 7ನೇ ವೇತನ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.

**ಜ್ಯೋತಿ ಸಂಜೀವಿನಿ/ಆರೋಗ್ಯ ಸೌಲಭ್ಯ ವಿಸ್ತರಣೆ:**

ಆರ್ಥಿಕ ಇಲಾಖೆಯು ದಿನಾಂಕ:30.10.2024ರಂದು ಸರ್ಕಾರಿ ನೌಕರರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ಪೂರ್ವ ಪ್ರಮಾಣದಲ್ಲಿ ಅನುಷ್ಠಾನಗೊಳಿಸಿಲ್ಲವಾದ್ದರಿಂದ, ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ಪೂರ್ಣ ಪ್ರಮಾಣದಲ್ಲಿ ಸರ್ಕಾರಿ ನೌಕರರಿಗೆ ಅನುಷ್ಠಾನಗೊಳಿಸಿದ ನಂತರ ಪ್ರಸ್ತಾವನೆಯನ್ನು ಪರಿಶೀಲಿಸುವುದಾಗಿ ತಿಳಿಸಲಾಗಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ, ಕಾಲಕಾಲಕ್ಕೆ ಸರ್ಕಾರದಿಂದ ನಿಗಧಿಪಡಿಸಿದ ವೇತನ ಶ್ರೇಣಿಯಂತೆ ವೇತನ ಬಡ್ತಿ ಹಾಗೂ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದಸ್ಯರಿಗೆ ಅನುಕಂಪ ಆಧಾರದ ಮೇಲ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುತ್ತದೆ.

**SWD/107/MDS/2026**

**(ಡಾ: ಹೆಚ್.ಸಿ ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.